# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

ಸಂಖ್ಯೆ : ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ-25/2018-19 ದಿನಾಂಕ : 25.02.2019
No. Date :

## ನಕ್ಷೆ ಮಂಜೂರಾತಿ ಪತ್ರ

ಶ್ರೀ ಎಂ.ಗೋವಿಂದಸ್ವಾಮಿ ನಾಯ್ಡು ರವರು ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಳೇಹಳ್ಳಿ ಗ್ರಾಮದ ಸರ್ವೆ ನಂ.64 ರಲ್ಲಿ ತಳಮಹಡಿ+ನೆಲ+04 ಮೇಲಂತಸ್ತು+ಟೆರೇಸ್ ಮಹಡಿ ಒಳಗೊಂಡಂತೆ ಒಟ್ಟು 83 ವಸತಿ ಅಪಾರ್ಟ್ ಮೆಂಟ್ ಕಟ್ಟಡಗಳನ್ನು ನಿರ್ಮಿಸಲು ನಕ್ಷೆ ಮಂಜೂರಾತಿ ನೀಡಲು ಮಾನ್ಯ ಆಯುಕ್ತರವರ ಆದೇಶ ಸಂಖ್ಯೆ 4793 ದಿನಾಂಕ 05/12/2018 ರಂದು ಅನುಮೋದನೆ ನೀಡಿರುತ್ತಾರೆ.

ಶ್ರೀಮತಿ/ಶ್ರೀ

ಶ್ರೀ ಎಂ.ಗೋವಿಂದಸ್ವಾಮಿ ನಾಯ್ಡು
ನಂ.135, ಹಳ್ಳೇಹಳ್ಳಿ ಗ್ರಾಮ,
ಬೆಂಗಳೂರು ಪೂರ್ವ ತಾಲ್ಲೂಕು,
ಬೆಂಗಳೂರು.

ಮಾನ್ಯರೆ,

ಅರ್ಜಿದಾರರಾದ ಮೆ॥ ಎಸ್.ಎನ್.ಎನ್.ಬಿಲ್ಡರ್ಸ್ ಪ್ರೈ.ಲಿ., ರವರು ಶ್ರೀ ಎಂ.ಗೋವಿಂದಸ್ವಾಮಿ ನಾಯ್ಡು ರವರು ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಳೇಹಳ್ಳಿ ಗ್ರಾಮದ ಸರ್ವೆ ನಂ.64 ರಲ್ಲಿ ತಳಮಹಡಿ+ನೆಲ+04 ಮೇಲಂತಸ್ತು+ಟೆರೇಸ್ ಮಹಡಿ ಒಳಗೊಂಡಂತೆ ಒಟ್ಟು 83 ವಸತಿ ವಸತಿ ಘಟಕಗಳ ಕಟ್ಟಡವನ್ನು ನಿರ್ಮಾಣ ಮಾಡಲು ದಿನಾಂಕ: 29.09.2018 ರಲ್ಲಿ ನೀವು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ. ನಕ್ಷೆ ಮಂಜೂರಾತಿ ಕೋರಿರುತ್ತೀರಿ ನಕ್ಷೆ ಮಂಜೂರಾತಿಯನ್ನು ದಿನಾಂಕ: 25.02.2019 ರಿಂದ ದಿನಾಂಕ: 24.02.2021ರ ವರೆಗೆ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ನೀಡಲಾಗಿದೆ ಎಂದು ಈ ಮೂಲಕ ನಾನು ತಿಳಿಯಪಡಿಸಿದ್ದೇನೆ.

## ಷರತ್ತುಗಳು

1. ಕಟ್ಟಡ ಕೆಲಸ ಪ್ರಾರಂಭಿಸುವ ಮುನ್ನ ಪ್ರಶ್ನಿತ ಪ್ರದೇಶದಲ್ಲಿ ಕಾಮಗಾರಿಗೆ ತಾತ್ಕಾಲಿಕ ಶೌಚಾಲಯವನ್ನು ಕಡ್ಡಾಯವಾಗಿ ನಿರ್ಮಿಸುವುದು ಮತ್ತು ನಿರ್ವಹಿಸಿ ಶುಚಿತ್ವವನ್ನು ಕಾಪಾಡುವುದು.
2. ಅನುಮೋದಿತ ಅಭಿವೃದ್ಧಿ ನಕ್ಷೆಯಲ್ಲಿ ವಿವಿಧ ಉದ್ದೇಶಕ್ಕಾಗಿ ಗುರುತಿಸಿರುವ ಪ್ರದೇಶಗಳು ಅಂದರೆ ನಾಗರೀಕ ಸೌಲಭ್ಯ ನಿವೇಶನ, ಉದ್ಯಾನವನ, ಬಯಲುಜಾಗ, ರಸ್ತೆಗಳು, ಸರ್ಫೇಸ್ ವಾಹನ ನಿಲುಗಡೆ ಪ್ರದೇಶಗಳನ್ನು ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ.
3. ಬಂಡಿದಾರಿ / ರಾಜ ಕಾಲುವೆ / ಮಳೆ ನೀರು ಚರಂಡಿ ಇನ್ನೂ ಯಾವುದೇ ತರಹದ ಖರಾಬು ಜಮೀನು ಸದರಿ ಜಮೀನಿನ ವಿಸ್ತೀರ್ಣದಲ್ಲಿ ಇದ್ದಲ್ಲಿ ಆ ಪ್ರದೇಶವನ್ನು ಯಾವುದೇ ತರಹದ ನಿರ್ಮಾಣದ ಕಾರ್ಯವನ್ನು ಮಾಡುವಂತಿಲ್ಲ ಹಾಗೂ ಇತರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ ಮತ್ತು ಅಂತಹ ಪ್ರದೇಶಕ್ಕೆ ಸೂಕ್ತ ರಕ್ಷಣೆ ಒದಗಿಸುವುದು.

4. ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಭಾಗದಲ್ಲಿ ಅಳವಡಿಸಿ ನಿರ್ವಹಿಸುವುದು.
5. ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಗೆ, ಬಿಡಿಎ / ಬಿಬಿಎಂಪಿ / ನಗರ ಸಭೆ / ಪಂಚಾಯತ್ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.
6. ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕಾಲ ಕಾಲಕ್ಕೆ ವಿಧಿಸುವ ಎಲ್ಲಾ ನಿಭಂದನೆಗಳಿಗೆ ಬದ್ಧರಾಗಿರತಕ್ಕದ್ದು.
7. ಮಳೆ ನೀರು ಕೊಯ್ಲನ್ನು ಬೆಂಗಳೂರು ಜಲ ಮಂಡಳಿ ರವರು ನಿಗಧಿಪಡಿಸಿರುವಂತೆ ಕಡ್ಡಾಯವಾಗಿ ಅಳವಡಿಸುವುದು
8. ನೀರು ಸರಬರಾಜುಗಾಗಿ ಇಬ್ಬಗೆಯ ಕೊಳವೆ (Dual Piping) ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು
9. ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಪೂರ್ಣ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.
10. ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.
11. ಅಭಿವೃದ್ಧಿದಾರರು ಕಟ್ಟಡಗಳಿಗೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.
12. ಅಭಿವೃದ್ಧಿದಾರರು ಟ್ರಾನ್ಸ್ ಫಾರ್ಮರ್ ಗಾಗಿ ಗುರುತಿಸಿರುವ ಪ್ರದೇಶದಲ್ಲಿ ಅಳವಡಿಸತಕ್ಕದ್ದು, ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.
13. ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ರಚನ್ಮಾತಕ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಬ್ದಾರರಾಗಿರತಕ್ಕದ್ದು. ಕಟ್ಟಡದ ರಚನ್ಮಾತಕ ವಿನ್ಯಾಸದ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾದ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಎಲ್ಲಾ ಸೂಕ್ತ ಕ್ರಮಗಳನ್ನು ಅಳವಡಿಸಿಕೊಳ್ಳತಕ್ಕದ್ದು, ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು, ಯಾವುದೇ ತರಹದ ಅನಾಹುತಕ್ಕೆ ಗುತ್ತಿಗೆ ಪಡೆದ ನಿರ್ಮಾಣದಾರರು ನೇರ ಜವಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.

14. ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.
15. ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.
16. ಕಟ್ಟಡದ ಕಾಮಗಾರಿ ಆರಂಭಿಸುವ ಮುನ್ನ ಅರ್ಜಿದಾರರು ಖಾತಾ / ಕಟ್ಟಡ ನಿರ್ಮಾಣದ ಪರವಾನಗಿ ಅನ್ನು ಸ್ಥಳೀಯ ಸಂಸ್ಥೆಯಿಂದ ಪಡೆಯತಕ್ಕದ್ದು.
17. ಕಾರ್ಯದರ್ಶಿ, ಕಾರ್ಮಿಕ ಇಲಾಖೆ ರವರ ಪತ್ರ ದಿನಾಂಕ: 04-03-2006 ರ ಪತ್ರದಲ್ಲಿ ವಿಧಿಸಿರುವ ಷರತ್ತುಗಳಿಗೆ ಅಭಿವೃದ್ಧಿದಾರರು ಬದ್ಧರಾಗಿರತಕ್ಕದ್ದು.
18. ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಯಾವುದೇ ಇಲಾಖೆ / ಸಂಸ್ಥೆಯು ಜವಬ್ದಾರರಾಗಿರುವುದಿಲ್ಲ.
19. ಅಭಿವೃದ್ಧಿದಾರರ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಾಲಾತಿ ನೀಡಿದ್ದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.
20. ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯನ್ನು ಅವಲಂಭಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.
21. ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.
22. ಕಟ್ಟಡ ನಿರ್ಮಾಣ ಸಮಯದಲ್ಲಿ ಸುತ್ತಮುತ್ತಲಿನ ಪ್ರದೇಶಕ್ಕೆ ಅನಗತ್ಯ ಶಬ್ದ ಮಾಲಿನ್ಯ ತಡೆಗಟ್ಟುವ ಸಂಬಂಧ, ನಿರ್ಮಾಣದ ಹೊರಭಾಗಗಳಿಗೆ ಅಗತ್ಯ ರಕ್ಷಣಾ ಕವಚವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರ ಸಲಹೆಯಂತೆ ಕಡ್ಡಾಯವಾಗಿ ಅಳವಡಿಸತಕ್ಕದ್ದು.
23. ಸ್ವತ್ತಿನಲ್ಲಿ ಗುರುತಿಸಿಲಾಗಿರುವ ಖರಾಬು ಪ್ರದೇಶವಾದ 101.17 ಚ.ಮೀ ನಲ್ಲಿ ಯಾವುದೇ ಅತಿಕ್ರಮಣ ಮಾಡದೆ ಸಾರ್ವಜನಿಕರ ಸ್ವತ್ತಾಗಿಯೇ ಉಳಿಸುವುದು.

24. ಅಭಿವೃದ್ಧಿದಾರರು / ಅರ್ಜಿದಾರರು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಯಿಂದ ತ್ಯಾಜ್ಯ ನೀರು ಸಂಸ್ಕರಣಾ ಘಟಕ ಸ್ಥಾಪಿಸುವ ಸಂಬಂಧ ಅಗತ್ಯವಿರುವ ನಿರಾಕ್ಷೇಪಣಾ ಪತ್ರ (Consent for Establishment) ವನ್ನು ಪಡೆದು ಕೂಡಲೇ / ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯುವ ಸಂದರ್ಭದಲ್ಲಿ ಕಡ್ಡಾಯವಾಗಿ ಸಲ್ಲಿಸುವ ಷರತ್ತಿಗೊಳಪಟ್ಟಿರುತ್ತದೆ.

ಆಯುಕ್ತರ ಪರವಾಗಿ
ಮಂಜೂರಾತಿ ನೀಡಿದವರ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಸಹಿ ಮತ್ತು ಹುದ್ದೆ ಸೀಲು
ಬೆಂಗಳೂರು.

ಯಥಾ ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು (ಉ) ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.